RNU AIR DHARWAD

# JULY 02, 2025
# AKASHAVANI - DHARWAD
# REGIONAL NEWS BULLETIN (KANNADA) 07.05 A.M.

**ಮುಖ್ಯಾಂಶಗಳು**

- **ಸಂವಿಧಾನದ ಮೌಲ್ಯ ಎತ್ತಿ ಹಿಡಿಯುವುದು ಪತ್ರಿಕಾ ವೃತ್ತಿಯ ಜವಾಬ್ದಾರಿ – ಮುಖ್ಯಮಂತ್ರಿ ಸಿದ್ದರಾಮಯ್ಯ**
- **ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಗಿರಿಧಾಮದಲ್ಲಿ ಇಂದು ರಾಜ್ಯ ಸಚಿವ ಸಂಪುಟ ಸಭೆ.**
- **ಕ್ವಾಂಟಮ್ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದ ಆದ್ಯತೆ – ಸಚಿವ_ಎನ್.ಎಸ್.ಭೋಸರಾಜು**
- **ಪರಿಶಿ ್ಟ ಸಮೂದಾಯದ ಜನರ ಸಾಮಾಜಿಕ ಮತ್ತು ಆರ್ಥಿಕ ಜೀವನ ಮಟ್ಟ ಸುಧಾರಿಸಲು ಆಶಾದೀಪ ಯೋಜನೆ ಸಹಕಾರಿ – ಸಚಿವ ಸಂತೋಷ ಲಾಡ್**

**ಈಗ ವಾರ್ತೆಗಳ ವಿವರ**

**ಎಲ್ಲರಿಗೂ ಸಮಾನ ಅವಕಾಶ** ಮತ್ತು ಜಾತಿ–ವರ್ಗ ರಹಿತ ಸಮಾಜ ಸೃಷ್ಟಿಯಾಗಬೇಕು ಎನ್ನುವುದು ಸಂವಿಧಾನದ ಮೌಲ್ಯ. ಇದನ್ನು ಎತ್ತಿ ಹಿಡಿಯುವುದು ಪತ್ರಿಕಾ ವೃತ್ತಿಯ ಜವಾಬ್ದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಿದ್ದ 'ಪತ್ರಿಕಾ ದಿನಾಚರಣೆ–2025' ಹಾಗೂ 'ನಿಜ ಸುದ್ದಿಗಾಗಿ ಸಮರ' ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಜನರನ್ನು ಎಚ್ಚರಿಸುವ ಹಾಗೂ ಸ್ವಾತಂತ್ರ್ಯ ಹೋರಾಟದ ಪರವಾಗಿ ಪತ್ರಿಕೆಗಳು ಕೆಲಸ ಮಾಡಿದ್ದವು. ಇಂದು ಪ್ರಜಾಪ್ರಭುತ್ವದ ಉಳಿವಿಗಾಗಿ ಶ್ರಮಿಸಬೇಕು ಸುದ್ದಿಗಳು ಸತ್ಯಾಂಶಗಳಿಂದ ಕೂಡಿರಬೇಕು. ಜನರ ಹಾಗೂ ಪ್ರಜಾಪ್ರಭುತ್ವದ ಪರವಾಗಿ ಇರಬೇಕು ಎಂಬುದು ತಮ್ಮ ಆಶಯವಾಗಿದೆ ಎಂದರು.

<><><>

**ಇಂದು ಚಿಕ್ಕಬಳ್ಳಾಪುರ ಜಿಲ್ಲೆಯ ವಿಶ್ವವಿಖ್ಯಾತ ನಂದಿಗಿರಿಧಾಮದಲ್ಲಿ 2025 ನೇ ಸಾಲಿನ** ರಾಜ್ಯ ಸಚಿವ ಸಂಪುಟದ 14 ನೇ ಸಭೆ ನಡೆಯಲಿದ್ದು, ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಈ ಸಭೆ ಚಿಕ್ಕಬಳ್ಳಾಪುರ, ಕೋಲಾರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಅಭಿವೃದ್ಧಿಯ ಕುರಿತಾಗಿರುವ ನಿರೀಕ್ಷೆ ಇದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.ನಂದಿಗಿರಿಧಾಮದ ಮಯೂರ ಸಭಾಂಗಣದಲ್ಲಿ ರಾಜ್ಯ ಸಚಿವ ಸಂಪುಟ ಸಭೆ ನಡೆಯುವ ಹಿನ್ನೆಲೆ, ಜಿಲ್ಲಾಡಳಿತದ ಅಧಿಕಾರಿಗಳ ತಂಡದೊಂದಿಗೆ ನಂದಿಗಿರಿಧಾಮಕ್ಕೆ ಭೇಟಿ ನೀಡಿ, ಪೂರ್ವ ಸಿದ್ಧತೆ ಪರಿಶೀಲಿಸಿ ಅವರು ಮಾತನಾಡಿದರು. ಮಧ್ಯಾಹ್ನ 12 ಗಂಟೆಗೆ ಸಚಿವ ಸಂಪುಟ ಸಭೆ ಆರಂಭವಾಗಲಿದೆ. ಸಚಿವ ಸಂಪುಟ ಸಭೆ ಹಿನ್ನೆಲೆ, ನಂದಿ ಗ್ರಾಮದ ಭೋಗ ನಂದೀಶ್ವರ ದೇವಾಲಯ ಮತ್ತು  ನಂದಿಗಿರಿಧಾಮಕ್ಕೆ ಖಾಸಗಿ ವ್ಯಕ್ತಿಗಳು ಹಾಗೂ ವಾಹನಗಳ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ. ಅಧಿಕೃತ ಅನುಮತಿ ಪತ್ರ ಹೊಂದಿರುವ ವ್ಯಕ್ತಿಗಳು ಮತ್ತು ವಾಹನಗಳಿಗೆ ಮಾತ್ರ ಪ್ರವೇಶಕ್ಕೆ ಅವಕಾಶವಿರುತ್ತದೆ ಎಂದು ತಿಳಿಸಿದರು.

<><><>

**ದೇಶದಲ್ಲೇ ಮೊದಲ ಕ್ವಾಂಟಮ್** ಕಂಪ್ಯೂಟರ್ ನಿರ್ಮಾಣದ ಮೂಲಕ ಕರ್ನಾಟಕ ರಾಜ್ಯ ದೇಶದಲ್ಲೇ ಪ್ರಥಮ ಸ್ಥಾನ ಹೊಂದಿದೆ. ಈ ಕ್ಷೇತ್ರದ ಹೆಚ್ಚಿನ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಲು ರಾಜ್ಯ ಸರ್ಕಾರ ಸಿದ್ಧವಿದ್ದು ಹೊಸ ನೀತಿ ರೂಪಿಸಲು ಚಿಂತನೆ ನಡೆಸಿದೆ. ಈ ಬಗ್ಗೆ ಶೀಘ್ರದಲ್ಲೇ ಬೃಹತ್ ಕೈಗಾರಿಕೆ ಹಾಗೂ ಐಟಿಬಿಟಿ ಸಚಿವರೊಂದಿಗೆ ಉನ್ನತ ಮಟ್ಟದ ಸಭೆ ನಡೆಸಲಾಗುವುದು ಎಂದು, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ರಾಜ್ಯದ ಕ್ವಾಂಟಮ್ ಕ್ಷೇತ್ರದ ಪ್ರಮುಖ

ಕಂಪನಿಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಕ್ವಾಂಟಮ್ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವಂತಹ ಹೊಸ ನೀತಿ ಸೇರಿದಂತೆ ಮುಂದಿನ ರೋಡ್ ಮ್ಯಾಪ್ ಬಗ್ಗೆ ಸಹ ಚರ್ಚಿಸಲಾಗುವುದು. ನಮ್ಮ ರಾಜ್ಯದಲ್ಲಿರುವ ಪ್ರಮುಖ ಸಾರ್ವಜನಿಕ ರಕ್ಷಣಾ ಕಂಪನಿಗಳು, ಕ್ವಾಂಟಮ್ ಕ್ಷೇತ್ರದಲ್ಲಿನ ಹೊಸ ಆವಿ ್ಕರಗಳನ್ನು ಬಳಸಿಕೊಳ್ಳುವ ಅವಕಾಶವನ್ನು ಹೊಂದಿವೆ ಎಂದರು.

<><><>

**ಖಾಸಗಿ ವಲಯದ** ಸಂಸ್ಥೆಗಳಲ್ಲಿ ಪರಿಶಿ ್ಟ ಸಮುದಾಯದವರಿಗೆ ಉದ್ಯೋಗ ದೊರಕಿಸುವ ಉದ್ದೇಶದಿಂದ ಆಶಾದೀಪ ಯೋಜನೆ ಜಾರಿಗೆ ತರಲಾಗಿದೆ ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ಧಾರವಾಡ ಜಿಲ್ಲೆಯ ವಿವಿಧ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣಾ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪರಿಶಿ ್ಟ ಸಮುದಾಯದ ಜನರಿಗೆ ಸಾಮಾಜಿಕ ಮತ್ತು ಆರ್ಥಿಕ ಜೀವನ ಮಟ್ಟವನ್ನು ಸುಧಾರಿಸಲು ಈ ಯೋಜನೆ ಸಹಕಾರಿಯಾಗಿದೆ. ಅಪ್ರೆಂಟಿಸ್ ತರಬೇತಿ ಪಡೆಯುವವರಿಗೆ ಶಿ ್ಯವೇತನ, ಖಾಯಂಗೊಂಡ ನಂತರ ವೇತನ ಮರುಪಾವತಿ ಸೌಲಭ್ಯಗಳು ಈ ಯೋಜನೆಯಲ್ಲಿವೆ ಎಂದರು.

<><><>

**ರಾಜ್ಯದಲ್ಲಿ ಕಳೆದ ಐದು** ವ ್ಗಗಳಲ್ಲಿ 82 ಹುಲಿಗಳು ಮೃತಪಟ್ಟಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿರುವ ಬಗ್ಗೆ ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಆಘಾತ ವ್ಯಕ್ತಪಡಿಸಿದ್ದು, ಈ ಎಲ್ಲ ಹುಲಿಗಳ ಸಾವಿನ ಬಗ್ಗೆ ವರದಿ ಸಲ್ಲಿಸುವಂತೆ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ. ಈವರೆಗೆ ಹುಲಿ ಹತ್ಯೆ ಪ್ರಕರಣಗಳಲ್ಲಿ ಎ ್ಟು ಜನರಿಗೆ ಶಿಕ್ಷೆಯಾಗಿದೆ? ಎ ್ಟು ಪ್ರಕರಣಗಳು ತನಿಖಾ ಹಂತದಲ್ಲಿವೆ?. ಯಾವ ಕಾರಣಕ್ಕೆ ತನಿಖೆ ವಿಳಂಬವಾಗಿದೆ ಎಂಬ ಸಂಪೂರ್ಣ ವಿವರವನ್ನು 10 ದಿನಗಳ ಒಳಗಾಗಿ ತಮಗೆ ಸಲ್ಲಿಸಲು ಸೂಚಿಸಿದ್ದಾರೆ.

<><><>

**ಕೆರೆ ತುಂಬಿಸುವ ಯೋಜನೆ, 'ಕೋಟಿ ವೃಕ್ಷ ಅಭಿಯಾನದ'** ಮೂಲಕ ಜಲ ಮತ್ತು ವೃಕ್ಷ ಕ್ರಾಂತಿಗೆ ಆಯೋಜಿಸಿರುವ ಕಾರ್ಯಕ್ರಮಗಳು ನಿತ್ಯ ನಿರಂತರ. ಒಂದು ಕಾಲದಲ್ಲಿ ಬರದ ನಾಡು ಎಂದೇ ಗುರುತಿಸಲ್ಪಡುತ್ತಿದ್ದ ಭೂಮಿಗೆ, ನೀರಾವರಿ ಯೋಜನೆಗಳ ಯಶಸ್ವಿ ಅನು ್ಠಾನದಿಂದಾಗಿ ಇಂದು ಹೆಚ್ಚಿನ ಬೆಲೆ ದೊರಕಿದೆ ಎಂದು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ನೀರಾವರಿ ಯೋಜನೆಯ ಫಲಾನುಭವಿಯಾಗಿರುವ, ದೇವರ ಹಿಪ್ಪರಗಿ ತಾಲೂಕಿನ ಕಡ್ಲೆವಾಡ ಗ್ರಾಮದ ಅಣ್ಣರಾಯ ಬಿರಾದಾರ ಅವರು, ಪ್ರಗತಿಪರ ರೈತರಾಗುವತ್ತ ದಿಟ್ಟ ಹೆಜ್ಜೆ ಇರಿಸಿರುವುದು ಶ್ಲಾಘನೀಯ. ತಮ್ಮ 6 ಎಕರೆ ಪ್ರದೇಶದಲ್ಲಿ ಪಪ್ಪಾಯಿ ಬೆಳೆದು 15 ಲಕ್ಷ ರೂಪಾಯಿ ಗಳಿಸಿರುವ ವಿ ಯ ತಿಳಿದು ಸಂತಸವಾಯಿತು. ಅಣ್ಣರಾಯ ಬಿರಾದರ ಸೇರಿದಂತೆ ನಮ್ಮೆಲ್ಲ ರೈತರ ಕೃಷಿ ಕಾಯಕಗಳು ಯಶಸ್ವಿಯಾಗಲಿ. ಬಸವನಾಡು ಮತ್ತ ್ಟು ಸಮೃದ್ಧಿಯಾಗಲಿ ಎಂದು ಸಚಿವರು ಹಾರೈಸಿದ್ದಾರೆ.

<><><>

**ಈಗ ಪ್ರಕಟಣೆ**

**ನಂತರ ಪ್ರದೇಶ ಸಮಾಚಾರ ಮುಂದುವರೆಯಲಿದೆ.**

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಇಂದು, ವಚನ ಸಾಹಿತ್ಯ ಪಿತಾಮಹ** ಎಂದು ಬಿರುದಾಂಕಿತರಾದ ಧಾರವಾಡದ ಫ.ಗು ಹಳಕಟ್ಟಿ ಅವರ ಜನ್ಮ ದಿನ. ಜುಲೈ 2, ಇವರ ಜನ್ಮ ದಿನವನ್ನು ವಚನ ಸಾಹಿತ್ಯ ಸಂರಕ್ಷಣಾ ದಿನ ಎಂದು ರಾಜ್ಯಾದ್ಯಂತ ಆಚರಿಸಲಾಗುತ್ತದೆ. ಶರಣರು ರಚಿಸಿದ ಸಾವಿರಾರು

ವಚನಗಳನ್ನು ಕ್ರೋಢೀಕರಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಇವರ ಸಾಧನೆಯ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಹಿರಿಯ ಸಂಶೋಧಕ ಧಾರವಾಡದ ಡಾಕ್ಟರ ವೀರಣ್ಣ ರಾಜೂರ ಅವರು.

**ಧ್ವನಿ– ವೀರಣ್ಣ ರಾಜೂರು (60 ಸೆಕೆಂದುಗಳು)**

<><><>

**ಕಲಬುರಗಿ ನಗರ ಹಾಗೂ ಜಿಲ್ಲೆಯನ್ನು** ಹಸಿರೀಕರಣಗೊಳಿಸಲು ಬೃಹತ್ ಮಟ್ಟದಲ್ಲಿ ಗಿಡ ನೆಟ್ಟು ಪೋ ’ಣೆ ಮಾಡುವ ‘ವನಮಹೋತ್ಸವ’ ಕಾರ್ಯಕ್ರಮಕ್ಕೆ ಇದೇ ತಿಂಗಳ 5 ರಂದು ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ ಕುರಿತು ಬೆಂಗಳೂರಿನಲ್ಲಿ ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಅವರೊಂದಿಗೆ ಮತ್ತು ಕಲಬುರಗಿ ಜಿಲ್ಲೆಯ ಹಿರಿಯ ಅಧಿಕಾರಿಗಳೊಂದಿಗೆ ವಿಡಿಯೊ ಸಂವಾದ ನಡೆಸಿದ ಬಳಿಕ ಈ ಮಾಹಿತಿ ನೀಡಿದ ಅವರು, ಈ ವನಮಹೋತ್ಸವದ ಅಂಗವಾಗಿ ನರೇಗಾ ಯೋಜನೆಯಡಿ 5 ಸಾವಿರ ಕಿಲೋ ಮೀಟರ್ ವ್ಯಾಪ್ತಿಯ ರಸ್ತೆಗಳ ಬದಿ ಗಿಡ ನೆಡುವ ‘ಹಸಿರುಪಥ’ ಹಾಗೂ ಕಲಬುರಗಿ ನಗರ ಹಸಿರೀಕರಣ ಕಾರ್ಯಕ್ರಮವಾದ ‘ಮನೆಗೊಂದು ಮರ’ ಯೋಜನೆಗಳಡಿ ಜಿಲ್ಲೆಯಲ್ಲಿ ಸಸಿ ಬೆಳೆಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

<><><>

**ಯುವ ಸಮುದಾಯದಲ್ಲಿ** ಇತ್ತೀಚೆಗೆ ಹೃದಯಾಘಾತ ಪ್ರಕರಣಗಳು ಹೆಚ್ಚಾಗುತ್ತಿದ್ದು, ಈ ನಿಟ್ಟಿನಲ್ಲಿ ಸೂಕ್ತ ತನಿಖೆ ನಡೆಸಿ, ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಖಾತೆ ಸಚಿವ ಡಾಕ್ಟರ್ ಶರಣಪ್ರಕಾಶ್ ಆರ್. ಪಾಟೀಲ್ ತಿಳಿಸಿದ್ದಾರೆ. ಯುವ ಸಮುದಾಯದಲ್ಲಿ ಅದರಲ್ಲೂ ಹಾಸನದಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಪ್ರಕರಣಗಳ ಕುರಿತು ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಚಿವರು, ಈ ಬಗ್ಗೆ ಸೂಕ್ತ ಹಾಗೂ ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು. ಹಾಸನದಲ್ಲಿ ಒಂದು ತಿಂಗಳಿಂದ ಸುಮಾರು ಜನ ಹೃದಯಾಘಾತದಿಂದ ಮೃತಪಟ್ಟಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದೆ. ಈ ಪ್ರಕರಣಗಳೂ ಸೇರಿದಂತೆ ಈ ಹಿಂದಿನ ಘಟನೆಗಳ ಬಗ್ಗೆಯೂ ಸೂಕ್ತ ತನಿಖೆ ನಡೆಸಿ, ಅಧ್ಯಯನ ಮಾಡಿ ಸಮಗ್ರ ವರದಿ ಸಲ್ಲಿಸುವಂತೆ ತಿಳಿಸಲಾಗಿದೆ ಎಂದು ಹೇಳಿದರು.

<><><>

**ಕುವೆಂಪು ವಿಶ್ವವಿದ್ಯಾಲಯದ** 38ನೇ ಸಂಸ್ಥಾಪನಾ ದಿನಾಚರಣೆಯನ್ನು ಇಂದು ಬೆಳಗ್ಗೆ ಶಿವಮೊಗ್ಗದ ಶಂಕರ ಘಟ್ಟದ ಬಸವ ಸಭಾ ಭವನದಲ್ಲಿ ಆಯೋಜಿಸಲಾಗಿದೆ.

<><><>